# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 734 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 26.12.2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಂಗಳೂರು ನಗರದಲ್ಲಿರುವ ವಿಕ್ಟೋರಿಯಾ ಆಸ್ಪತ್ರೆಗೆ ಪ್ರತಿದಿನ 1000 ರಿಂದ 1500 ರೋಗಿಗಳು ಚಿಕಿತ್ಸೆಗಾಗಿ ಆಗಮಿಸುತ್ತಿದ್ದು, ರೋಗಿಗಳೊಂದಿಗೆ ಬಂದಿರುವವರಿಗೆ ಇಲ್ಲಿ ತಂಗಲು ಯಾವುದೇ ಸೂಕ್ತ ವ್ಯವಸ್ಥೆಗಳು ಇಲ್ಲದೆ ಇರುವುದರಿಂದ ಇವರು ಆಸ್ಪತ್ರೆಯ ಸುತ್ತಮುತ್ತಲಿನ ರಸ್ತೆಗಳಲ್ಲಿ ಸಮಯ ಕಳೆಯಬೇಕಾದಂತಹ ದುಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಅಧೀನದ ವಿಕ್ಟೋರಿಯಾ ಆಸ್ಪತ್ರೆಗೆ ಬರುವ ರೋಗಿಗಳ ಪರಿಚಾರಕರುಗಳಿಗೆ ತಂಗಲು ಆಸ್ಪತ್ರೆಯ ಆವರಣದಲ್ಲಿ ವಿಶ್ರಾಂತಿಧಾಮದ ವ್ಯವಸ್ಥೆ ಇದ್ದು ಇಲ್ಲಿ ದೂರದ ಊರುಗಳಿಂದ ಚಿಕಿತ್ಸೆಗಾಗಿ ಬರುವ ರೋಗಿಗಳ ಸಂಬಂಧಿಕರುಗಳು ತಂಗುತ್ತಾರೆ ಹಾಗೂ ಈ ಸಂಸ್ಥೆಯ ಅಧೀನದ ಎಲ್ಲಾ ಆಸ್ಪತ್ರೆಗಳಲ್ಲೂ ರೋಗಿಗಳಿಗೆ ಊಟ ಮಾಡಲು, ದಣಿವಾರಿಸಿಕೊಳ್ಳಲು ಕಾಯುವ ಕೊಠಡಿ ಸೌಲಭ್ಯವು ಲಭ್ಯವಿರುತ್ತದೆ. |
| ಆ) | ಬಂದಿದ್ದಲ್ಲಿ, ರೋಗಿಗಳೊಂದಿಗೆ ಬಂದಿರುವವರಿಗೆ ವಿಕ್ಟೋರಿಯಾ ಆಸ್ಪತ್ರೆ ಆವರಣದಲ್ಲಿ ತಂಗಲು ಸೂಕ್ತ ವ್ಯವಸ್ಥೆಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಈಗಾಗಲೇ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿಯೇ ವಿಶ್ರಾಂತಿಧಾಮದ ಸೌಲಭ್ಯವಿದ್ದು, ರೋಗಿಗಳ ಪರಿಚಾರಕರುಗಳ ಇದರ ಉಪಯೋಗ ಪಡೆಯುತ್ತಿರುತ್ತಾರೆ. |
| ಇ) | ಈ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುವ ರೋಗಿಗಳನ್ನು ದಾಖಲಾತಿ ಮಾಡಿಕೊಳ್ಳಲು ಸಾಕಷ್ಟು ವಿಳಂಬ ಮಾಡುತ್ತಿರುವುದಾಗಿ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಚಿಕಿತ್ಸೆಗೆ ಆಗಮಿಸುವ ರೋಗಿಗಳಿಗೆ ತ್ವರಿತವಾಗಿ ಚಿಕಿತ್ಸೆ ಲಭಿಸುವಂತಹ ಪರಿಸ್ಥಿತಿ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಬೆಳಗ್ಗೆ 9.00 ರಿಂದ ಸಂಜೆ 4.00 ಗಂಟೆಯವರೆಗೆ ಹೊರರೋಗಿ ವಿಭಾಗದಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಅಗತ್ಯವಿರುವ ರೋಗಿಗಳಿಗೆ ಆಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆಯನ್ನು ಮುಂದುವರೆಸಲಾಗುತ್ತಿರುತ್ತದೆ. ಸಂಜೆ 4.00 ಗಂಟೆಯ ನಂತರ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿರುವ ಟ್ರಾಮಾ ಕೇರ್ ಕೇಂದ್ರದ ತುರ್ತು ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸೆಯಲ್ಲಿ ಯಾವುದೇ ವಿಳಂಬವಾಗುತ್ತಿಲ್ಲ. |

ಸಂಖ್ಯೆ: ಎಂಇಡಿ 560 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು